**Akashvani: Bangalore**
**Regional Bulletin In Kannada**
**18.06.2026: 14.30hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**18.06.2026: 14.30hrs**

*********

**ಮುಖ್ಯಾಂಶಗಳು**

1. ವಿಧಾನಪರಿಷತ್ ಚುನಾವಣೆ; ಮಧ್ಯಾಹ್ನದ ವೇಳೆಗೆ ಶೇಕಡ ೬೫.೫೦ಯಷ್ಟು ಮತದಾನ
2. ನಾಳೆ ಪ್ರಧಾನಿ ಅವರಿಂದ ವಿಕಸಿತ ಭಾರತ ರೋಜ್ಗಾರ್ ಯೋಜನೆಯಡಿ ಫಲಾನುಭವಿಗಳಿಗೆ ಪ್ರೋತ್ಸಾಹ ಧನ ವಿತರಣೆ
3. ಬೆಂಗಳೂರಿನಲ್ಲಿ ಹಸಿ, ಒಣ ತ್ಯಾಜ್ಯಗಳನ್ನು ಮೂಲದಲ್ಲೇ ಬೇರ್ಪಡಿಸಿ ನೀಡುವಂತೆ ಸಚಿವ ಕೃಷ್ಣ ಬೈರೇಗೌಡ ಸೂಚನೆ
4. ಪ್ಲಾಸ್ಟಿಕ್ ಪಾರ್ಕ್ ನಿರ್ಮಾಣದಿಂದ ಕರಾವಳಿಯ ಆರ್ಥಿಕತೆ ಅಭಿವೃದ್ಧಿ - ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಅಭಿಮತ

*********

ವಿಧಾನಸಭೆಯಿಂದ ವಿಧಾನಪರಿಷತ್ತಿನ ಏಳು ಸ್ಥಾನಗಳಿಗೆ ಮತದಾನ ನಡೆಯುತ್ತಿದೆ. ಒಟ್ಟು ೮ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಪ್ರತಿಪಕ್ಷ ನಾಯಕ ಆರ್. ಅಶೋಕ ಸೇರಿದಂತೆ ಬಹುತೇಕ ಶಾಸಕರು ಈವರೆಗೆ ಮತ ಚಲಾಯಿಸಿದ್ದಾರೆ. ಮಧ್ಯಾಹ್ನ ೧ ಗಂಟೆಯ ವೇಳೆಗೆ ಶೇಕಡ ೬೫.೫೦ಯಷ್ಟು ಮತದಾನ ನಡೆದಿದ್ದು, ೨೧೨ ಮತಗಳ ಚಲಾವಣೆಯಾಗಿದೆ. ಮತದಾನ ಪ್ರಾರಂಭವಾಗುವ ಮೊದಲು ಪ್ರತಿಪಕ್ಷ ನಾಯಕ ಆರ್. ಅಶೋಕ ಅವರ ಕಚೇರಿಯಲ್ಲಿ ನಡೆದ ಉಪಹಾರ ಸಭೆಯಲ್ಲಿ ಬಿಜೆಪಿ ತನ್ನ ಶಾಸಕರಿಗೆ ವಿಪ್ ಜಾರಿ ಮಾಡಿದೆ. ಕಾಂಗ್ರೆಸ್ ೧೨೦ ಶಾಸಕರಿಗೆ ೫ನೇ ಅಭ್ಯರ್ಥಿ ವಿನಯ್ ಕಾರ್ತಿಕ್‌ಗೆ ತಮ್ಮ ಎರಡನೇ ಪ್ರಾಶಸ್ತ್ಯದ ಮತ ನೀಡುವಂತೆ ಸೂಚಿಸಿದೆ. ಈ ನಡುವೆ ಜೆಡಿಎಸ್‌ನ ಕೆಲವು ಶಾಸಕರು ಅಡ್ಡ ಮತದಾನದ ಮೂಲಕ ವಿನಯ್ ಕಾರ್ತಿಕ್‌ಗೆ ಬೆಂಬಲ ನೀಡುವ ಸಾಧ್ಯತೆ ಇದೆ ಎಂದು ಐಎಎನ್‌ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ. ಏಳು ಸ್ಥಾನಗಳಿಗೆ ೮ ಅಭ್ಯರ್ಥಿಗಳು ಕಣದಲ್ಲಿದ್ದು, ನಾಲ್ವರು ಕಾಂಗ್ರೆಸ್ ಅಭ್ಯರ್ಥಿಗಳು ಮತ್ತು ಇಬ್ಬರು ಬಿಜೆಪಿ ಅಭ್ಯರ್ಥಿಗಳು ನಿರಾಯಾಸವಾಗಿ ಗೆಲ್ಲುವ ನಿರೀಕ್ಷೆ ಇದೆ. ಏಳನೇ ಸ್ಥಾನಕ್ಕೆ ತೀವ್ರ ಪೈಪೋಟಿ ಏರ್ಪಟ್ಟಿದೆ.

ಕಾಂಗ್ರೆಸ್‌ನ ಐದನೇ ಅಭ್ಯರ್ಥಿ ವಿನಯ್ ಕಾರ್ತಿಕ್ ಮತ್ತು ಜೆಡಿಎಸ್ ಬಿಜೆಪಿ ಮೈತ್ರಿಕೂಟ ಬೆಂಬಲಿತ ಕೆ. ಗೋವಿಂದರಾಜು ನಡುವೆ ತೀವ್ರ ಸ್ಪರ್ಧೆ ಏರ್ಪಟ್ಟಿದೆ. ಜೆಡಿಎಸ್‌ನ ಹಿರಿಯ ಶಾಸಕ ಜಿ.ಟಿ. ದೇವೇಗೌಡ ಮತ ಚಲಾಯಿಸಿದ ಬಳಿಕ ಮಾತನಾಡಿ, ಆತ್ಮಸಾಕ್ಷಿಯಂತೆ ಮತಚಲಾಯಿಸಿರುವುದಾಗಿ ತಿಳಿಸಿದ್ದಾರೆ.

*********

ಪ್ರಧಾನಿ ನರೇಂದ್ರ ಮೋದಿ ಅವರು, ನವದೆಹಲಿಯಲ್ಲಿ ನಾಳೆ ನಡೆಯಲಿರುವ ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ವಿಕಸಿತ ಭಾರತ ರೋಜ್‌ಗಾರ್ ಯೋಜನೆಯಡಿ ಫಲಾನುಭವಿಗಳಿಗೆ ೨ ಸಾವಿರದ ೪೦೦ ಕೋಟಿ ರೂಪಾಯಿ ಪ್ರೋತ್ಸಾಹ ಧನ ವಿತರಿಸಲಿದ್ದಾರೆ. ರಾಜ್ಯದ ದಕ್ಷಿಣ ಕನ್ನಡ, ಚಿಕ್ಕಮಗಳೂರು, ಚಿತ್ರದುರ್ಗ, ಬಳ್ಳಾರಿ, ಕಲಬುರಗಿ, ಹುಬ್ಬಳ್ಳಿ, ಬೆಳಗಾವಿ, ಮೈಸೂರು, ರಾಯಚೂರು, ಶಿವಮೊಗ್ಗ ಹಾಗೂ ಉಡುಪಿ ಜಿಲ್ಲೆಗಳಲ್ಲಿ ಕಾರ್ಯಕ್ರಮ ನಡೆಯಲಿದೆ. ಈ ಯೋಜನೆಯು ಮೊದಲ ಬಾರಿಗೆ ಉದ್ಯೋಗಿಗಳಿಗೆ ೧೫ ಸಾವಿರ ರೂಪಾಯಿವರೆಗೆ ಮತ್ತು ಪ್ರತಿ ಹೆಚ್ಚುವರಿ ನೇಮಕಾತಿಗೆ ಉದ್ಯೋಗದಾತರಿಗೆ ತಿಂಗಳಿಗೆ ೩ ಸಾವಿರ ರೂಪಾಯಿವರೆಗೆ ಪ್ರೋತ್ಸಾಹ ಧನ ನೀಡಲಿದೆ. ಇದು ಔಪಚಾರಿಕ ಉದ್ಯೋಗವನ್ನು ಪ್ರೋತ್ಸಾಹಿಸುವುದರ ಜೊತೆಗೆ ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ವಿಸ್ತರಿಸಲಿದೆ.

*********

ಬೆಂಗಳೂರಿನಲ್ಲಿ ಹಸಿ, ಒಣ ತ್ಯಾಜ್ಯಗಳನ್ನು ಮನೆಗಳಲ್ಲೇ ಜನರೇ ಬೇರ್ಪಡಿಸಿ, ಕಸದ ಗಾಡಿಗೆ ನೀಡಬೇಕು ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ. ಕಸದ ಗಾಡಿಗಳು ತ್ಯಾಜ್ಯಗಳನ್ನು ಬೇರ್ಪಡಿಸಿಯೇ ಘಟಕಗಳಿಗೆ ತಲುಪಿಸಬೇಕು ಎಂದು ಹೇಳಿದ್ದಾರೆ. ವ್ಯವಸ್ಥೆಯ ಅಡಿಪಾಯದಿಂದಲೇ ಬದಲಾವಣೆ ತರುವ ದೂರದೃಷ್ಟಿ ಯೋಜನೆ ಇಲ್ಲದೆ ಕಸದ ಸಮಸ್ಯೆಗೆ ಶಾಶ್ವತ ಪರಿಹಾರ ಸಾಧ್ಯವಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.

*********

ರಾಜಕೀಯ ಪಕ್ಷಗಳು ರೆಸಾರ್ಟ್ ಸಂಸ್ಕೃತಿಯನ್ನು ಕೊನೆಗೊಳಿಸಬೇಕೆಂದು ಬಿಜೆಪಿ ಮುಖಂಡ ಸುರೇಶ್ ಕುಮಾರ್ ಒತ್ತಾಯಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದು ಮತದಾರರಿಗೆ ತಪ್ಪು ಸಂದೇಶಗಳನ್ನು ರವಾನಿಸುತ್ತದೆ ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿ ಪ್ರತಿಯೊಂದು ರಾಜಕೀಯ ಪಕ್ಷಗಳು ರೆಸಾರ್ಟ್ ಸಂಸ್ಕೃತಿ ಕೊನೆಗೊಳ್ಳಬೇಕು ಎಂದು

ಆಗ್ರಹಿಸಿದ್ದಾರೆ. ಇದೇ ವೇಳೆ ಬಿಜೆಪಿಯ ಇಬ್ಬರು ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

*********

ಬಡತನ ನಿರ್ಮೂಲನೆ ೮೧ ಕೋಟಿಗೂ ಹೆಚ್ಚು ಜನರಿಗೆ ಉಚಿತ ಆಹಾರಧಾನ್ಯ ವಿತರಣೆ ಸೇರಿದಂತೆ ಹಲವು ಸಾಮಾಜಿಕ ಹಾಗೂ ಆರ್ಥಿಕ ಕಾರ್ಯಗಳ ಮೂಲಕ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಆಡಳಿತ ನಡೆಸಿದೆ ಎಂದು ಕೇಂದ್ರ ಸಚಿವ ವಿ. ಸೋಮಣ್ಣ ತಿಳಿಸಿದ್ದಾರೆ. ಪಿಎಂ ಉಜ್ವಲ ಯೋಜನೆಯಡಿಯಲ್ಲಿ ೧೧ ಕೋಟಿ ಎಲ್‌ಪಿಜಿ ಸಿಲಿಂಡರ್ ನೀಡುವ ಮೂಲಕ ಹೊಗೆಮುಕ್ತ ಅಡುಗೆಗೆ ಪ್ರೋತ್ಸಾಹಿಸಲಾಗಿದೆ. ೧೫ ಸಾವಿರ ಕೋಟಿ ಸಾಲವನ್ನು ಪರಿಶಿಷ್ಟಜಾತಿ ಹಾಗೂ ವರ್ಗದ ಉದ್ದಿಮೆದಾರರಿಗೆ ನೀಡಲಾಗಿದೆ. ರೈತರ ಖಾತೆಗೆ ಇದುವರೆಗೆ ೪.೩ ಲಕ್ಷ ಕೋಟಿ ರೂಪಾಯಿ ನೆರವು ನೀಡಲಾಗಿದೆ. ದೇಶದ ಮೂಲಸೌಕರ್ಯಕ್ಕೆ ಹೂಡಲಾಗಿರುವ ಬಂಡವಾಳ ಎರಡು ಲಕ್ಷ ಕೋಟಿಯಿಂದ ೧೨ ಲಕ್ಷ ಕೋಟಿಗೆ ಏರಿಕೆಯಾಗಿದೆ ಎಂದು ತಿಳಿಸಿದ್ದಾರೆ.

*********

ಪ್ರಧಾನಿ ನರೇಂದ್ರ ಮೋದಿ ಅವರ ಆಶಯದಂತೆ ಕರಾವಳಿಯ ಆರ್ಥಿಕತೆ ಹಾಗೂ ಕೈಗಾರಿಕಾ ಕ್ಷೇತ್ರವನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯಲು ಮಂಗಳೂರು ಸಮೀಪದ ಗಂಜಿಮಠದಲ್ಲಿ ನಿರ್ಮಾಣವಾಗಲಿರುವ ಪ್ಲಾಸ್ಟಿಕ್ ಪಾರ್ಕ್ ಪ್ರಮುಖ ಪಾತ್ರ ವಹಿಸಲಿದೆ ಎಂದು ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ತಿಳಿಸಿದ್ದಾರೆ. ಪ್ಲಾಸ್ಟಿಕ್ ಪಾರ್ಕ್ ಯೋಜನಾ ಪ್ರದೇಶಕ್ಕೆ ಭೇಟಿ ನೀಡಿ ಕಾಮಗಾರಿ ಪರಿಶೀಲಿಸಿದ ಬಳಿಕ ಮಾತನಾಡಿದ ಅವರು, ೧೦೪ ಎಕರೆ ವಿಸ್ತೀರ್ಣದಲ್ಲಿ ತಲೆಯೆತ್ತಲಿರುವ ಈ ಪಾರ್ಕ್ ಅತ್ಯಂತ ಮಹತ್ವಾಕಾಂಕ್ಷಿ ಯೋಜನೆಯಾಗಿದೆ. ಈ ಯೋಜನೆ ಪೂರ್ಣಗೊಂಡಲ್ಲಿ ಸ್ಥಳೀಯ ಯುವಕರಿಗೆ ದೊಡ್ಡ ಮಟ್ಟದ ಉದ್ಯೋಗಾವಕಾಶ ದೊರೆಯಲಿದೆ ಎಂದು ಹೇಳಿದ್ದಾರೆ. ಬಾಕಿ ಉಳಿದಿರುವ ಎಲ್ಲಾ ಕಾಮಗಾರಿಗಳನ್ನು ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

*********

ಮುಂಬರುವ ದಿನಗಳಲ್ಲಿ ಯಾವುದೇ ಗ್ರಾಮದಲ್ಲೂ ಕುಡಿಯುವ ನೀರಿನ ಅಭಾವ ಉಂಟಾಗದಂತೆ ಮುಂಜಾಗ್ರತೆ ವಹಿಸಬೇಕು ಎಂದು ಕೋಲಾರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ

ಅಧಿಕಾರಿ ಡಾ. ಪ್ರವೀಣ್. ಪಿ. ಬಾಗೇವಾಡಿ ಎಚ್ಚರಿಕೆ ನೀಡಿದ್ದಾರೆ. ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನಿರ್ಲಕ್ಷ್ಯ ವಹಿಸುವ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದ್ದಾರೆ. ಬೇಸಿಗೆ ಹಾಗೂ ಮುಂಗಾರು ವಿಳಂಬದ ಹಿನ್ನೆಲೆಯಲ್ಲಿ ಗ್ರಾಮೀಣ ಭಾಗದಲ್ಲಿ ಜನರಿಗೆ ಕುಡಿಯುವ ನೀರಿನ ತೊಂದರೆಯಾಗಬಾರದು. ಟಾಸ್ಕ್ ಫೋರ್ಸ್ ಅಡಿಯಲ್ಲಿ ಕೊರೆಸಲಾಗಿರುವ ೭೦ಕ್ಕೂ ಹೆಚ್ಚು ಹೊಸ ಬೋರ್‌ವೆಲ್‌ಗಳಿಗೆ ಕೇವಲ ಮೂರು ದಿನಗಳಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ. ಯೋಜನೆಗಳು ಜನರಿಗೆ ತಲುಪುವಲ್ಲಿ ವಿಳಂಬವಾದರೆ ಸಹಿಸುವುದಿಲ್ಲ ಎಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ಮುಂಗಾರು ಮಳೆ ಆರಂಭವಾಗುವ ಮುನ್ನ ಶಾಲಾ ಕಟ್ಟಡಗಳು ಹಾಗೂ ಅಂಗನವಾಡಿ ಕೇಂದ್ರಗಳ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳುವುದು ಅತ್ಯಗತ್ಯ ಎಂದು ತಿಳಿಸಿದ್ದಾರೆ.

*********

ಭಾರತೀಯ ರೈಲ್ವೆ ಈಗ ದಿವ್ಯಾಂಗ ಪ್ರಯಾಣಿಕರಿಗೆ ನೀಡುವ ರೈಲ್ವೆ ರಿಯಾಯಿತಿ ಫೋಟೋ ಗುರುತಿನ ಚೀಟಿ ನೀಡಿಕೆ ಮತ್ತು ನವೀಕರಣವನ್ನು ಸೌಲಭ್ಯವನ್ನು ಇನ್ನು ಮುಂದೆ ಸಂಪೂರ್ಣ ಆನ್‌ಲೈನ್ ಮೂಲಕ ಪಡೆಯಬಹುದಾಗಿದೆ ಎಂದು ರೈಲ್ವೆ ಸಲಹಾ ಸಮಿತಿ ಮಾಜಿ ಸದಸ್ಯ ಡಾ. ಬಾಬುರಾವ್ ತಿಳಿಸಿದ್ದಾರೆ. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಕೆ, ದಾಖಲೆ ಅಪ್ಲೋಡ್, ಸ್ಥಿತಿ ಪರಿಶೀಲನೆ, ಅನುಮೋದಿತ ಕಾರ್ಡ್ ಡೌನ್ಲೋಡ್ - ಎಲ್ಲವೂ ಡಿಜಿಟಲೀಕರಣ ಮಾಡಲಾಗಿದೆ. ಅರ್ಹರಾದ ದಿವ್ಯಾಂಗ ಪ್ರಯಾಣಿಕರು ಆನ್ಲೈನ್ ಅರ್ಜಿ ಸಲ್ಲಿಸಲು divyangjanid.indianrail.gov.in ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

*********

ಇದೇ ಭಾನುವಾರ ದೇಶದಾದ್ಯಂತ ರಾಷ್ಟ್ರೀಯ ಅರ್ಹತೆ ಮತ್ತು ಪ್ರವೇಶ ಪರೀಕ್ಷೆ - ನೀಟ್ ನಡೆಯಲಿದೆ. ಹಾವೇರಿ ಜಿಲ್ಲೆಯ ಐದು ಪರೀಕ್ಷಾ ಕೇಂದ್ರಗಳಲ್ಲಿ ಯಾವುದೇ ಲೋಪವಾಗದಂತೆ ಎಚ್ಚರಿಕೆ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ. ಜಿಲ್ಲೆಯಲ್ಲಿ ೨ ಸಾವಿರದ ೫೩೨ ಅಭ್ಯರ್ಥಿಗಳು ಪರೀಕ್ಷೆ ಎದುರಿಸಲಿದ್ದಾರೆ. ಈಗಾಗಲೇ ಪರೀಕ್ಷಾ ಪೂರ್ವ ತಯಾರಿ ಮಾಡಿಕೊಳ್ಳಲಾಗಿದೆ. ಪರೀಕ್ಷಾ ಕೇಂದ್ರಗಳಲ್ಲಿ ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ನೀಡದಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ನಿಟ್ ಪರೀಕ್ಷೆ ಪಾರದರ್ಶಕವಾಗಿ

ಶಾಂತಿಯುತವಾಗಿ ನಡೆಯಲು ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

*********

೧. ಸಾರ್ವಜನಿಕ ಸೇವೆಗಳಲ್ಲಿ ವಿಳಂಬ ಧೋರಣೆ ಹಾಗೂ ಸಿಬ್ಬಂದಿಗಳ ಬೇಜವಾಬ್ದಾರಿತನಕ್ಕೆ ಕಡಿವಾಣ ಹಾಕಲು ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ಕೋಲಾರ ನಗರಸಭೆ ಕಚೇರಿಗೆ ಇಂದು ದಿಢೀರ್ ಭೇಟಿ ನೀಡಿ, ಕಚೇರಿಯ ಕಾರ್ಯವೈಖರಿ ಹಾಗೂ ಸಿಬ್ಬಂದಿಗಳ ಹಾಜರಾತಿ ತಪಾಸಣೆ ನಡೆಸಿದರು.

೨. ರೈತರು ಮತ್ತು ಹೈನು ಉತ್ಪಾದಕರು ಜಾನುವಾರುಗಳ ತುರ್ತು ಚಿಕಿತ್ಸೆಗಾಗಿ 'ಪಶು ಸಂಜೀವಿನಿ' ಯೋಜನೆಯ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ದಾವಣಗೆರೆ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ತಿಳಿಸಿದ್ದಾರೆ.

೩. ಮೂಲದಲ್ಲಿಯೇ ತ್ಯಾಜ್ಯವನ್ನು ವಿಂಗಡಿಸುವ ಮೂಲಕ ಘನ ತ್ಯಾಜ್ಯ ಸಂಗ್ರಹಣೆ, ವಿಂಗಡಣೆ ಹಾಗೂ ವಿಲೇವಾರಿಯನ್ನು ವೈಜ್ಞಾನಿಕವಾಗಿ ವೈಜ್ಞಾನಿಕವಾಗಿ ಹಾಗೂ ಹೆಚ್ಚು ಪರಿಣಾಮಕಾರಿಯಾಗಿ ನಿರ್ವಹಿಸುವ ಮೂಲಕ ಗ್ರಾಮ ಪಂಚಾಯಿತಿಗಳು ಕಾರ್ಯೋನ್ಮುಖವಾಗಬೇಕಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಡಾ. ಬಿವಿ ವಾಸಂತಿ ಅಮರ್ ತಿಳಿಸಿದ್ದಾರೆ.

*****END****